# ಕರ್ನಾಟಕ ವಿಧಾನಪರಿಷತ್ತು

## ನೂರ ನಲವತ್ತ ಮೂರನೆಯ ಅಧಿವೇಶನದ ಮುಂದುವರೆದ ಉಪವೇಶನ

## **ಚುಕ್ಕೆ ರಹಿತ ಪ್ರಶ್ನೆ**

ದಿನಾಂಕ : 05-03-2021 ಪ್ರಶ್ನೆ ಸಂಖ್ಯೆ : 646 (712)

ಸದಸ್ಯರ ಹೆಸರು ಮತ್ತು ಕ್ಷೇತ್ರ : ಶ್ರೀ ಕೆ.ಎ. ತಿಪ್ಪೇಸ್ವಾಮಿ (ನಾಮನಿರ್ದೇಶನ)

ಉತ್ತರ ನೀಡಬೇಕಾದ ದಿನಾಂಕ : 05-03-2021

ಉತ್ತರಿಸುವ ಸಚಿವರು: ಮಾನ್ಯ ಕೈಮಗ್ಗ ಮತ್ತು ಜವಳಿ ಹಾಗೂ ಅಲ್ಪಸಂಖ್ಯಾತರ ಕಲ್ಯಾಣ ಸಚಿವರು

ವಿಷಯ : ಅಲ್ಪ ಸಂಖ್ಯಾತ ಸಂಘ -ಸಂಸ್ಥೆಗಳಿಗೆ ಬಿಡುಗಡೆ ಮಾಡಿದ ಅನುದಾನ

(ಅ) ರಾಜ್ಯದಲ್ಲಿನ ಹಲವಾರು ಅಲ್ಪಸಂಖ್ಯಾತ ವರ್ಗಕ್ಕೆ ಸೇರಿದ ಸಮುದಾಯಗಳ ಸಂಘ-ಸಂಸ್ಥೆಗಳು ಸಕಾಲಿಕವಾಗಿ ಕೇಂದ್ರ ಸರ್ಕಾರದ ಮತ್ತು ರಾಜ್ಯ ಸರ್ಕಾರದ ವಿವಿಧ ಯೋಜನೆಗಳ ಅಡಿ ದೊರೆಯುವ ಸಹಾಯ ಧನದಿಂದ ವಂಚಿತರಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ವಿವರ ನೀಡುವುದು;

(ಆ) ಕಳೆದ 03 ವರ್ಷಗಳಲ್ಲಿ ಕೇಂದ್ರ ಮತ್ತು ರಾಜ್ಯ ಸರ್ಕಾರಗಳ ವಿವಿಧ ಯೋಜನೆಗಳ ಅಡಿಯಲ್ಲಿ ಅಲ್ಪಸಂಖ್ಯಾತ ಸಂಘ-ಸಂಸ್ಥೆಗಳಿಗೆ ಒದಗಿಸಿದ ಮತ್ತು ಬಿಡುಗಡೆ ಮಾಡಿದ ಅನುದಾನವೆಷ್ಟು; (ಸಂಪೂರ್ಣ ವಿವರ ನೀಡುವುದು)

(ಇ) ವರ್ಷಾವಾರು ಅಲ್ಪಸಂಖ್ಯಾತ ಸಂಘ-ಸಂಸ್ಥೆಗಳಿಗೆ ನೀಡುವ ಅನುದಾನ ಕಡಿಮೆ ಆಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ ; ಬಂದಿದ್ದಲ್ಲಿ, ಅದರ ವಿವರ ನೀಡುವುದು;

(ಈ) ಹಿಂದಿನ ವರ್ಷಗಳ ಆಯ-ವ್ಯಯದಲ್ಲಿ ಬಳಕೆ ಆಗದೆ ಉಳಿದ ಅನುದಾನವನ್ನು ಮುಂದಿನ ವರ್ಷದ ಆಯ-ವ್ಯಯದಲ್ಲಿ ಸೇರ್ಪಡಿಸಿಕೊಳ್ಳಲು ಕ್ರಮ ವಹಿಸಲಾಗುವುದೇ ? (ವಿವರ ನೀಡುವುದು)